# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಂ.ವಿ.ಬದಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ ಮತ್ತು ಶ್ರೀಮತಿ ಎಂ.ಪಿ.ನೀಲಾಂಬಿಕ ಸಹಾಯಕ ಲೆಕ್ಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ ಹಾಗೂ ಶ್ರೀ ಶರಣಯ್ಯ ಹಿರೇಮಠ, ಪ್ರ.ದ.ಸ. ತಾಲ್ಲೂಕು ಪಂಚಾಯಿತಿ, ಕುಷ್ಟಗಿ ಇವರುಗಳ ವಿರುದ್ಧದ ಶಿಸ್ತು ಕ್ರಮ- ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ-ಆದೇಶ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಪತ್ರ ಸಂ. ಜಿಪಂಕೊ/ಉಖಾಯೋ/ಶಿಕ್ರ/2015-16/2104 ದಿನಾಂಕ 6.7.2015.

------

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ 6.7.2015ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಇವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಕುಷ್ಟಗಿ ತಾಲ್ಲೂಕು ಪಂಚಾಯಿತಿಯ ಎಂ.ಜಿ.ಎನ್.ಆರ್.ಇ.ಜಿ.ಎ. ಹಾಗೂ ವಿವಿಧ ಯೋಜನೆಗಳಲ್ಲಿ ಆರ್ಥಿಕ ಅಶಿಸ್ತು ಎಸೆಗಿರುವ ಬಗ್ಗೆ ಮತ್ತು ನಿಯಮಗಳ ಉಲ್ಲಂಘನೆ ಆಗಿರುವ ಬಗ್ಗೆ ವರದಿಯನ್ನು ಸಲ್ಲಿಸಿರುತ್ತಾರೆ. ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಂಬಂಧಪಟ್ಟ ಕಛೇರಿಗಳಲ್ಲಿ ನಿರ್ವಹಿಸಬೇಕಾದ ವಹಿಗಳನ್ನು ಸಮರ್ಪಕವಾಗಿ ನಿರ್ವಹಿಸಿಲ್ಲವೆಂದು ಕಾಮಗಾರಿಗಳ ಆರಂಭ ಪ್ರಗತಿ ಮತ್ತು ಮುಕ್ತಾಯಕ್ಕೆ ಸಂಬಂಧಿಸಿದಂತೆ ಛಾಯಾ ಚಿತ್ರಗಳನ್ನು ನಿರ್ವಹಿಸದೇ ಕೇವಲ ಮುಕ್ತಾಯದ ಛಾಯಾ ಚಿತ್ರಗಳನ್ನು ಮಾತ್ರ ನಿರ್ವಹಣೆ ಮಾಡಲಾಗಿದೆ ಎಂದೂ ಕೆ.ಟಿ.ಪಿ.ಪಿ ಕಾಯ್ದೆ ಮತ್ತು ನಿಯಮಗಳ ಉಲ್ಲಂಘನೆ ಮಾಡಿ ದರಪಟ್ಟಿ ಕರೆದಿರುವುದು ಹಾಗೂ ಲೆಕ್ಕಪತ್ರ ನಿರ್ವಹಣೆ ಮಾಡದೆ ಒಟ್ಟಾರೆ ತೀವ್ರ ಸ್ವರೂಪದ ಆರ್ಥಿಕ ಅಶಿಸ್ತು ಮತ್ತು ನಿಯಮಗಳ ಉಲ್ಲಂಘನೆಯಾಗಿರುವ ಬಗ್ಗೆ ತಿಳಿಸಿರುತ್ತಾರೆ.

ಮುಂದುವರೆದು, ರಾಜ್ಯ ಗುಣ ನಿಯಂತ್ರಣ ಮಾನೀಟರ್ ಆದ ಶ್ರೀ ಎಂ.ಎನ್. ಶೇಖರಪ್ಪ ಇವರು ಕುಷ್ಟಗಿ ತಾಲ್ಲೂಕು ಪಂಚಾಯಿತಿಯಲ್ಲಿ 2014-15ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಕಾಮಗಾರಿಗಳ ಸ್ಥಳ ಪರಿಶೀಲನೆ ಮಾಡಿ ಸಲ್ಲಿಸಿರುವ ವರದಿಯನುಸಾರ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳು, ಪ್ರಾಯೋಗಿಕ ಸಾಮಗ್ರಿಗಳು, ಪೀಠೋಪಕರಣ ಸಾಮಗ್ರಿಗಳು ಹಾಗೂ ಕುಡಿಯುವ ನೀರು ಶುದ್ಧೀಕರಣ ಘಟಕ ಒದಗಿಸುವುದು ಈ ರೀತಿ ಸಾಮಗ್ರಿಗಳ ಖರೀದಿಗೆ ಸಂಬಂಧಿಸಿದಂತೆ ಒಟ್ಟಾರೆ ರೂ.70,16,868/-ಗಳನ್ನು ಪಾವತಿಸಿದ್ದು, ಈ ಪೈಕಿ ಕೇವಲ ಬಿಳೇಕಲ್ಲು ಮತ್ತು ಕಬ್ಬರಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರೂ. 1,99,552/-ಗಳ ಕ್ರೀಡಾ ಸಾಮಗ್ರಿಗಳು ಮತ್ತು ಪ್ರಯೋಗಾಲಯ ಉಪಕರಣಗಳು ಲಭ್ಯವಾಗಿದ್ದು, ಈ ಬಾಬ್ತಿನಲ್ಲಿ ರೂ.68,17,316/-ಗಳನ್ನು ಹೆಚ್ಚುವರಿ ಪಾವತಿಸಿರುವುದಾಗಿ ವರದಿ ಮಾಡಿರುತ್ತಾರೆ. ಸಾಮಗ್ರಿಗಳ ಖರೀದಿಗೆ ಸಂಬಂಧಿಸಿದಂತೆ ಹಣ ಪಾವತಿಸಿರುವ ಮೊತ್ತಕ್ಕೆ ಸಮನಾಗಿ ಸಾಮಗ್ರಿಗಳನ್ನು ಶಾಲೆಗಳಿಗೆ ವಿತರಿಸಿರುವುದಿಲ್ಲ. ಉಳಿದಂತೆ, ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ಅಂದಾಜು ಪಟ್ಟಿ ತಯಾರಿಸದಿರುವುದು, ಕಾಮಗಾರಿ ಅಳತೆಗಳನ್ನು ಅಳತೆ ಪುಸ್ತಕದಲ್ಲಿ ದಾಖಲಿಸದಿರುವುದು ಇತ್ಯಾದಿ ತೀವ್ರ ಸ್ವರೂಪದ ಖರೀದಿ ನಿಯಮಾವಳಿಗಳ ಉಲ್ಲಂಘನೆಯಾಗಿದ್ದು, ಸದರಿ ಗಂಭೀರ ಸ್ವರೂಪದ ಅಕ್ರಮ ಮತ್ತು ಹಣ ದುರುಪಯೋಗಕ್ಕೆ ಈ ಕೆಳಕಂಡ ಅಧಿಕಾರಿ / ನೌಕರರುಗಳು ಜವಾಬ್ದಾರರೆಂದು ತಿಳಿಸಿರುತ್ತಾರೆ :-

1 )ಶ್ರೀ ಎಂ.ವಿ.ಬದಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ

(ಸ್ಥಳ ನಿರೀಕ್ಷಣೆಯಲ್ಲಿರುವ)

2) ಶ್ರೀಮತಿ ಎಂ.ಪಿ.ನೀಲಾಂಬಿಕ ಸಹಾಯಕ ಲೆಕ್ಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ

3) ಶ್ರೀ ಶರಣಯ್ಯ ಹಿರೇಮಠ, ಪ್ರ.ದ.ಸ. ತಾಲ್ಲೂಕು ಪಂಚಾಯಿತಿ, ಕುಷ್ಟಗಿ

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೊಪ್ಪಳ ಇವರ ದಿನಾಂಕ 6.7.2015ರ ವರದಿ ಹಾಗೂ ರಾಜ್ಯ ಗುಣ ನಿಯಂತ್ರಣ ಮಾನಿಟರ್‌ರವರ ವರದಿಗಳನ್ನು ಪರಿಶೀಲಿಸಲಾಗಿ ಮೇಲೆ ತಿಳಿಸಿರುವ 3

ಅಧಿಕಾರಿ /ನೌಕರರುಗಳು 70 ಲಕ್ಷಗಳಿಗೂ ಹೆಚ್ಚು ಮೊತ್ತದ ಹಣ ಪಾವತಿಸಿದ್ದು. ಹಣ ಪಾವತಿಸಿರುವ ಮೊತ್ತಕ್ಕೆ ಸಮನಾಗಿ ಸಾಮಗ್ರಿಗಳನ್ನು ಖರೀದಿಸಿ ಅವುಗಳನ್ನು ಸಂಬಂಧಪಟ್ಟ ಶಾಲೆಗಳಿಗೆ ಒದಗಿಸದೇ ಸದರಿ ಸಾಮಗ್ರಿಗಳ ಮೊತ್ತವನ್ನು ಮೇಲೆ ತಿಳಿಸಿರುವ ಅಧಿಕಾರಿಗಳು ಶಾಮೀಲಾಗಿ ಹಣ ದುರುಪಯೋಗ ಮಾಡಿರುವುದು ಹಾಗೂ ತಾಲ್ಲೂಕು ಪಂಚಾಯಿತಿ ಕಛೇರಿಯಲ್ಲಿ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ನಿರ್ವಹಿಸಬೇಕಾದ ವಹಿಗಳನ್ನು ನಿರ್ವಹಿಸದೇ ತೀವ್ರ ಸ್ವರೂಪದ ಅಕ್ರಮಗಳನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಮೇಲೆ ತಿಳಿಸಿರುವ 03 ಅಧಿಕಾರಿ/ನೌಕರರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ವಿಫಲರಾಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)ನ್ನು ಉಲ್ಲಂಘಿಸಿರುತ್ತಾರೆ.

ಮೇಲ್ನೋಟಕ್ಕೆ ಬೃಹತ್ ಪ್ರಮಾಣದ ಹಣ ದುರುಪಯೋಗವಾಗಿರುವುದು ಮತ್ತು ಗಂಭೀರ ಸ್ವರೂಪದ ಅಕ್ರಮಗಳು ನಡೆದಿರುವುದು ಕಂಡು ಬರುವುದರಿಂದ ಮೇಲೆ ತಿಳಿಸಿರುವ 3 ಅಧಿಕಾರಿ/ನೌಕರರುಗಳ ವಿರುದ್ಧದ ಅಕ್ರಮಗಳ ಬಗೆಗಿನ ತನಿಖೆ / ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತುಪಡಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 177 ವಿಸೇಬಿ 2015 ಬೆಂಗಳೂರು ದಿನಾಂಕ:19.08.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಅಧಿಕಾರಿ/ನೌಕರರು ತಮ್ಮ ಕಾರ್ಯ ನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ಬೃಹತ್ ಪ್ರಮಾಣದ ಹಣ ದುರುಪಯೋಗ, ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಮತ್ತು ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿಯವರುಗಳನ್ನು ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಗಳು 1957ರ ನಿಯಮ 10(1)(ಡಿ) ರ ಅನುಸಾರ ಅವರುಗಳ ವಿರುದ್ಧದ ಆರೋಪಗಳ ಕುರಿತಂತೆ ತನಿಖೆ / ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಿದೆ.

1) ಶ್ರೀ ಎಂ.ವಿ.ಬದಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ (ಸ್ಥಳ ನಿರೀಕ್ಷಣೆಯಲ್ಲಿರುವ)

2) ಶ್ರೀ ಶರಣಯ್ಯ ಹಿರೇಮಠ, ಪ್ರ.ದ.ಸ. ತಾಲ್ಲೂಕು ಪಂಚಾಯಿತಿ, ಕುಷ್ಟಗಿ

ಮೇಲೆ ತಿಳಿಸಿರುವ ಅಧಿಕಾರಿ/ನೌಕರರುಗಳಲ್ಲದೆ ರಾಜ್ಯ ಲೆಕ್ಕಪತ್ರ ಇಲಾಖೆಯ ಸೇವೆಗೆ ಸೇರಿದ ಶ್ರೀಮತಿ ಎಂ.ಪಿ.ನೀಲಾಂಬಿಕ, ಸಹಾಯಕ ಲೆಕ್ಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ ಇವರು ಸರ್ಕಾರಿ ನೌಕರರಾಗಿ ಕರ್ತವ್ಯ ನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ಬೃಹತ್ ಪ್ರಮಾಣದ ಹಣ ದುರುಪಯೋಗ, ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಮತ್ತು ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಇವರನ್ನು ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಗಳು 1957ರ ನಿಯಮ 10(1)(ಡಿ) ಸಹವಾಚನ ನಿಯಮ 16 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸೇವೆಯಿಂದ ಅಮಾನತ್ತುಪಡಿಸಿದೆ.

ಅಮಾನತ್ತುಗೊಂಡಿರುವ ಮೇಲಿನ ಅಧಿಕಾರಿ/ನೌಕರರುಗಳು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ.

ಸದರಿಯವರುಗಳು ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡಕೂಡದೆಂದು ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ವಿ.ಹನುಮಂತಯ್ಯ).
ಸರ್ಕಾರದ ಅಧೀನ ಕಾರ್ಯದರ್ಶಿ.(ಸೇ-ಬಿ-ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಲೆಕ್ಕಪತ್ರ-1 & 2/ಆಡಿಟ್) ಕರ್ನಾಟಕ. ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ. ಆರ್ಥಿಕ ಇಲಾಖೆ. ವಿಧಾನ ಸೌಧ. ಬೆಂಗಳೂರು.
3. ನಿಯಂತ್ರಕರು. ರಾಜ್ಯ ಲೆಕ್ಕ ಪತ್ರ ಇಲಾಖೆ. ಕಾವೇರಿ ಭವನ. ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ. ಜಿಲ್ಲಾ ಪಂಚಾಯತಿ. ಕೊಪ್ಪಳ
5. ಸಂಬಂಧಿಸಿದ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ. ಜಿಲ್ಲಾ ಪಂಚಾಯತಿ. ಕೊಪ್ಪಳ ಇವರ ಮುಖಾಂತರ)

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನ ಸೌಧ. ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ (ಆಡಳಿತ). ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಇವರ ಆಪ್ತ ಶಾಖೆಗೆ.
3. ವಿಶೇಷಾಧಿಕಾರಿ. ಗಣಕ ಕೋಶ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.